## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಟಿ. ದುರುಗಪ್ಪ ಬಿನ್ ಅಯ್ಯಪ್ಪ ಸಾ. ಮುಸ್ಟೂರು ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ ಇವರು ಮುಸ್ಟೂರು ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛ ಭಾರತ್ ಮಿಷನ್ ಯೋಜನೆಯ ಅನುದಾನದ ಹಣವನ್ನು ದುರುಪಯೋಗಿಸಿಕೊಂಡಿರುವ ಹಿನ್ನೆಲೆಯಲ್ಲಿ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಕೊಪ್ಪಳ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂಕೊ/ಎಸ್.ಬಿ.ಎಂ/ಸಿಸಿಎ/ಸಿಆರ್-1/2018-19, ದಿನಾಂಕ:03-01-2019.
2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/1135/ಗ್ರಾಪಂಅ/2018 ದಿನಾಂಕ:02.02.2019.
3) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ:205:ಗ್ರಾಪಂಅ:2019, ದಿನಾಂಕ:20.02.2019.
4) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ಇವರ ಪತ್ರ ಸಂಖ್ಯೆ:ಕಂ/ಪ್ರಾಆಕ/ಜಿಪಂ/141/2018-19/718, ದಿನಾಂಕ:06.05.2019.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಕೊಪ್ಪಳ ಜಿಲ್ಲೆ ರವರ ದಿನಾಂಕ:03-01-2019ರ ಪತ್ರದಲ್ಲಿ ಮುಸ್ಟೂರು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀ ಟಿ. ದುರುಗಪ್ಪ ಬಿನ್ ಅಯ್ಯಪ್ಪ ಸಾ. ಮುಸ್ಟೂರು, ಇವರು ದಿನಾಂಕ: 16.10.2017 ಹಾಗೂ 17.10.2017 ರಂದು ಮುಸ್ಟೂರು ಗ್ರಾಮ ಪಂಚಾಯಿತಿಯ ಶೌಚಾಲಯಗಳ ಭೌತಿಕ ಮತ್ತು ಆರ್ಥಿಕ ತಪಾಸಣೆ ಮಾಡಲಾಗಿದ್ದು 2016-17, 2017-18 ನೇ ಸಾಲಿನಲ್ಲಿ ಒಬ್ಬ ಫಲಾನುಭವಿಗೆ ಸುಮಾರು 42 ಬಾರಿ, ಫಲಾನುಭವಿ ಅಲ್ಲದ ಖಾತೆದಾರರಿಗೆ 44 ವಿವಿಧ ಖಾತೆದಾರರಿಗೆ ಹಣ ಜಮಾ ಮಾಡಿರುವುದು, ಅಲ್ಲದೇ ಶೌಚಾಲಯ ನಿರ್ಮಾಣ ಮಾಡದೇ ಇರುವ ಖಾತೆಗೆ ಹಣ ಜಮಾ ಮಾಡಿಕೊಂಡು ಶೌಚಾಲಯದ ಹಣ ದುರುಪಯೋಗಪಡಿಸಿಕೊಂಡಿರುತ್ತಾರೆ ಹಾಗೂ ಪರಿಶೀಲನೆ ಮಾಡಲು ಹೋದಾಗ ಕೆಲವು ಹಳೆಯ ಶೌಚಾಲಯಗಳಿಗೆ ಹೊಸದಾಗಿ ಬಣ್ಣ ಬಳಿದು ಅವುಗಳನ್ನು ಹೊಸ ಶೌಚಾಲಯಗಳಂತೆ ತೋರಿಸಿ ಹಣ ಎತ್ತುವಳಿ ಮಾಡಿರುತ್ತಾರೆ. ಕೆಲವು ಪ್ರಕರಣಗಳಲ್ಲಿ ಫಲಾನುಭವಿಗಳ ನಕಲಿ ಭಾವಚಿತ್ರಗಳನ್ನು ಸೃಷ್ಟಿಸಿ ಹಣ ಪಾವತಿ ಮಾಡಿರುತ್ತಾರೆ. ಶೌಚಾಲಯವಿಲ್ಲದ ಕುಟುಂಬಗಳಿಗೆ ಶೌಚಾಲಯ ಇದೆ ಎಂದು ಹಲವಾರು ಬಾರಿ ಹಣ ಪಾವತಿ ಮಾಡಿರುವುದು ತನಿಖಾ ಸಮಯದಲ್ಲಿ ಕಂಡುಬಂದಿರುತ್ತದೆ ಹಾಗೂ 2016-17 ಮತ್ತು 2017-18 ನೇ ಸಾಲಿನಲ್ಲಿ ಒಟ್ಟು 492 ಫಲಾನುಭವಿಗಳಿಗೆ ಹಣ ಪಾವತಿ ಮಾಡಿರುವುದು ಕಂಡುಬಂದಿದ್ದು ಆದರೆ ಕಛೇರಿಯಲ್ಲಿ ಕೇವಲ 124 ಕಡತಗಳು ಮಾತ್ರ ಲಭ್ಯವಿದ್ದು ಹಳೆಯ ಶೌಚಾಲಯಗಳ ಸಂಬಂಧ 07 ಫಲಾನುಭವಿಗಳ ಹೆಸರಿನಲ್ಲಿ ಹಣ ಎತ್ತುವಳಿ ಮಾಡಿರುವುದು ತನಿಖೆಯಲ್ಲಿ ಕಂಡುಬಂದಿರುತ್ತದೆ ಎಂದು ಹಾಗೂ ಮುಸ್ಟೂರು ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 375 ಶೌಚಾಲಯಗಳ ಹಣ ರೂ. 46,92,000/- (ನಲವತ್ತಾರು ಲಕ್ಷ ತೊಂಭತ್ತೆರಡು ಸಾವಿರ ರೂಪಾಯಿಗಳು) ದುರುಪಯೋಗವಾಗಿರುತ್ತದೆ. ಸದರಿ ವರದಿಯನ್ನು ವೀಕ್ಷಿಸಲಾಗಿ ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿರುವುದು ಕಂಡುಬಂದಿರುತ್ತದೆ. ಈ ಪ್ರಕರಣದ ಎಲ್ಲಾ ಆಪಾದಿತರ ವಿರುದ್ಧ ದಿನಾಂಕ: 21.01.2018 ರಂದು ಸೈಬರ್, ಆರ್ಥಿಕ ಮತ್ತು ಮಾದಕದ್ರವ್ಯ ಅಪರಾಧ ಪೋಲೀಸ್ ಠಾಣೆ ಕೊಪ್ಪಳದಲ್ಲಿ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲಾಗಿದೆ. ಸದರಿಯವರ ವಿರುದ್ಧ 21.01.2018 ರಂದು ಸೈಬರ್, ಆರ್ಥಿಕ ಮತ್ತು ಮಾದಕದ್ರವ್ಯ ಅಪರಾಧ ಪೋಲೀಸ್ ಠಾಣೆ ಕೊಪ್ಪಳದಲ್ಲಿ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ

ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ) ಮತ್ತು 48(4) ರಡಿಯಲ್ಲಿ ಸದರಿಯವರ ಸದಸ್ಯತ್ವವನ್ನು ರದ್ದುಪಡಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮ ಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ ಮೇಲೆ ಓದಲಾದ (3)ರಲ್ಲಿ ಕಡತದ ಮೂಲ ಪ್ರತಿಗಳನ್ನು ಕಲಬುರಗಿ ಪ್ರಾದೇಶಿಕ ಆಯುಕ್ತರಿಗೆ ಕಳುಹಿಸಲಾಗಿತ್ತು.

ಮೇಲೆ ಓದಲಾದ (4) ರ ವರದಿಯಲ್ಲಿ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕು ಮುಸ್ಟೂರು ಗ್ರಾಮ ಪಂಚಾಯಿತಿಯಲ್ಲಿ ಸರ್ಕಾರದ ಸುತ್ತೋಲೆಯಲ್ಲಿನ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸದೇ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಒಟ್ಟು 492 ಶೌಚಾಲಯಗಳ ಪೈಕಿ 117 ಶೌಚಾಲಯಗಳನ್ನು ನಿರ್ಮಿಸಿದ್ದು, 375 ಶೌಚಾಲಯಗಳು ನಿರ್ಮಿಸದೇ ಇರುವ ಫಲಾನುಭವಿಗಳಿಗೆ ಹಾಗೂ 7 ಹಳೆಯ ಶೌಚಾಲಯಗಳಿಗೆ ಹಣವನ್ನು ಪಾವತಿಸಿರುತ್ತಾರೆ. ಅಲ್ಲದೇ 44 ಫಲಾನುಭವಿಗಳಲ್ಲದ ಖಾತೆದಾರರಿಗೆ ಹಲವು ಬಾರಿ ಹಣ ಸಂದಾಯ ಮಾಡಲಾಗಿರುತ್ತದೆ ಹಾಗೂ 2016-17 ನೇ ಸಾಲಿನಲ್ಲಿ 298 ಮತ್ತು 2017-18 ನೇ ಸಾಲಿನಲ್ಲಿ 77 ಹೀಗೆ ಒಟ್ಟು 375 ವೈಯಕ್ತಿಕ ಶೌಚಾಲಯಗಳ ನಿರ್ಮಾಣದಲ್ಲಿ ರೂ. 46,92,000/- ಗಳ ದುರುಪಯೋಗಿರುವುದು ತನಿಖಾ ವರದಿಯಲ್ಲಿ ಕಂಡು ಬಂದಿರುತ್ತದೆ.

ಶ್ರೀ ಟಿ. ದುರುಗಪ್ಪ ಬಿನ್ ಅಯ್ಯಪ್ಪ, ಅಧ್ಯಕ್ಷರು, ಮುಸ್ಟೂರು ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ ಇವರು ರೂ.15,64,000/- ಗಳನ್ನು ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು ಕಂಡು ಬಂದಿರುವುದರಿಂದ ಸದರಿ ಅಧ್ಯಕ್ಷರ ಮೇಲೆ ಹೊರಿಸಲಾದ ಆರೋಪವು ವಿಚಾರಣಾ ವರದಿಯಲ್ಲಿ ವಿಶ್ಲೇಷಿಸಿದಂತೆ ಸಾಬೀತಾಗಿರುತ್ತದೆ ಎಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ಸರ್ಕಾರವು ಈ ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಹಾಗೂ ಪ್ರಾದೇಶಿಕ ಆಯುಕ್ತರ ವರದಿಯನ್ನು ಪರಿಶೀಲಿಸಲಾಗಿದ್ದು, ಸದರಿ ವರದಿಯಂತೆ ಮುಸ್ಟೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀ ಟಿ. ದುರುಗಪ್ಪ ಬಿನ್ ಅಯ್ಯಪ್ಪ ಇವರ ವಿರುದ್ಧದ ಅಧಿಕಾರ ದುರುಪಯೋಗದ ಆರೋಪವು ಸಾಬೀತಾಗಿರುತ್ತದೆ. ಹಿನ್ನೆಲೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರಡಿಯಲ್ಲಿ ಇವರ ಅಧ್ಯಕ್ಷ ಸ್ಥಾನ ಮತ್ತು ಸದಸ್ಯತ್ವವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 410 ಗ್ರಾಪಂಅ 2018 ಬೆಂಗಳೂರು, ದಿನಾಂಕ: 03-07-2019.</u>

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಟಿ. ದುರುಗಪ್ಪ ಬಿನ್ ಅಯ್ಯಪ್ಪ, ಅಧ್ಯಕ್ಷರು, ಮುಸ್ಟೂರು ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ ಇವರುಗಳ ವಿರುದ್ಧದ ಅಧಿಕಾರ ದುರುಪಯೋಗದ ಆರೋಪವು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43ಎ 1(i) ಮತ್ತು 48(4)ರನ್ವಯ ಮುಸ್ಟೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷ

ಸ್ಥಾನ ಮತ್ತು ಸದಸ್ಯತ್ವವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ಆದೇಶಿಸಿದೆ. ಹಾಗೂ ದುರುಪಯೋಗವಾಗಿರುವ ಮೊತ್ತವನ್ನು ಸದರಿಯವರಿಂದ ವಸೂಲಿ ಮಾಡಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

3/7

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1) ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ.
4) ಶ್ರೀ ಟಿ. ದುರುಗಪ್ಪ ಬಿನ್ ಅಯ್ಯಪ್ಪ, ಅಧ್ಯಕ್ಷರು, ಮುಸ್ಟೂರು ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮುಸ್ಟೂರು ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
7) ಗಣಕ ಕೋಶ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.